ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: 14 ಗೃಹ - ಸಿ.ಡಿ. ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 14/3/21

# ಎಸ್ಐಟಿಗೆ ಸ್ವಾತಂತ್ರ್ಯ

ಸಂ.ಕ. ಸಮಾಚಾರ ಬೆಂಗಳೂರು 14/3/21

ಮಾಜಿ ಸಚಿವ ರಮೇಶ್ ಜಾರಕಿಹೊಳಿ ಪ್ರಕರಣ ಕುರಿತಂತೆ ತನಿಖೆ ನಡೆಸಲು ವಿಶೇಷ ತನಿಖಾ ದಳ (ಎಸ್ಐಟಿ)ಗೆ ಮುಕ್ತ ಸ್ವಾತಂತ್ರ್ಯ ನೀಡಲಾಗಿದೆ ಎಂದು ಗೃಹ ಸಚಿವ ಬಸವರಾಜ್ ಬೊಮ್ಮಾಯಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿಷ್ಪಕ್ಷಪಾತವಾಗಿ ತನಿಖೆ ನಡೆಸಿ ವರದಿ ನೀಡುವಂತೆ ಎಸ್ಐಟಿಗೆ ಸೂಚನೆ ನೀಡಲಾಗಿದೆ. ಸಿ.ಡಿ ಹಿಂದುಗಡೆ ಹಿಂದೆ ಯಾರಿದ್ದಾರೆ, ಅವರ ಉದ್ದೇಶವಾದರೂ ಏನು? ಎಲ್ಲವೂ ಬಯಲಾಗಬೇಕು ಎಂದರು.

ಎಸ್ಐಟಿಗೆ ಸಂಪೂರ್ಣವಾದ ಸ್ವಾತಂತ್ರ್ಯ ನೀಡಿದ್ದೇವೆ. ಅವರು ಮುಕ್ತವಾಗಿ ಯಾರನ್ನಾದರೂ ಬೇಕಾದರೂ ವಿಚಾರಣೆಗೆ ಗುರಿಪಡಿಸಬಹುದು. ಇದರಲ್ಲಿ ಸರ್ಕಾರದ ಪಾತ್ರ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಎಸ್ಐಟಿಯು ಕೆಲವರನ್ನು ವಶಕ್ಕೆ ತೆಗೆದುಕೊಂಡು ವಿಚಾರಣೆಗೊಳಪಡಿಸಿರುವ ಈ ಹಂತದಲ್ಲಿ ನಾನು ಏನನ್ನೂ ಹೇಳಬಯಸುವುದಿಲ್ಲ. ತನಿಖೆ ನಡೆಯುತ್ತಿರುವುದರಿಂದ ಅಭಿಪ್ರಾಯ ವ್ಯಕ್ತಪಡಿಸುವುದು ಸರಿಯಲ್ಲ. ನಾನು ಏನೇ ಹೇಳಿಕೆ ಕೊಟ್ಟರೂ ತನಿಖೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ. ಹೀಗಾಗಿ ಜವಾಬ್ದಾರಿಯುತ ಸ್ಥಾನದಲ್ಲಿರುವ ನಾನು ಹೇಳಿಕೆ ಕೊಡುವುದು ಅಷ್ಟು ಸಮಂಜಸವಲ್ಲ. ತನಿಖೆ ಪೂರ್ಣಗೊಳ್ಳುವವರೆಗೂ ಏನನ್ನೂ ಹೇಳಲು ಸಾಧ್ಯವಿಲ್ಲ ಎಂದು ಹೇಳಿದರು. ಸೋಮವಾರದಿಂದ ಸದನದಲ್ಲಿ ಯತ್ನಾಳ್ ಪ್ರತಿಭಟನೆ ನಡೆಸುವ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಯತ್ನಾಳ್ ಜೊತೆ ಈಗಾಗಲೇ ಮಾತನಾಡಿದ್ದೇನೆ. ಹಿಂದುಳಿದ ವರ್ಗಗಳ ಆಯೋಗಕ್ಕೆ ವರದಿ ಕೊಡಲು ಹೇಳಿದ್ದೇವೆ. ಹಾಗಾಗಿ ಪ್ರತಿಭಟನೆ ಬೇಡ ಎಂದು ಮನವಿ ಮಾಡಿದ್ದೇವೆ. ಆಯೋಗ ಸ್ವಾಮೀಜಿಗಳಿಗೆ ವಿಚಾರಣೆಗೆ ಆಹ್ವಾನಿಸಿದೆ. ಅವರು ಆಯೋಗದ ಮುಂದೆ ಹಾಜರಾಗುತ್ತಾರೋ, ಇಲ್ಲವೋ ಎಂಬುದನ್ನು ಈಗಲೇ ಊಹೆ ಮಾಡಿ ಹೇಳುವುದಕ್ಕೆ ಆಗುವುದಿಲ್ಲ ಎಂದು ವಿವರಿಸಿದರು.

ಕಾಂಗ್ರೆಸ್‌ನಿಂದ ಶಿವಮೊಗ್ಗ ಚಲೋ ಪ್ರತಿಭಟನೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್‌ನವರು ಪ್ರತಿಭಟನೆ ಮಾಡಲಿ, ನೋಡೋಣ ಏನಾಗುತ್ತೆ ಎಂದರು.

# ಸಿ.ಡಿ.ಪ್ರಕರಣ: ಸಿಎಂಗೆ ಮಾಹಿತಿ

ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರ ಕುರಿತು ಎನ್ನಲಾದ ಸಿ.ಡಿ ಪ್ರಕರಣ ಕುರಿತಾಗಿ ಕೈಗೊಂಡಿರುವ ತನಿಖಾ ಕ್ರಮಗಳ ಬಗ್ಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು.ಗೃಹ ಸಚಿವ ಬಸವರಾಜ್ ಬೊಮ್ಮಾಯಿ ಶನಿವಾರ ಮಾಹಿತಿ ನೀಡಿದರು. ಮುಖ್ಯಮಂತ್ರಿಗಳ ಅಧಿಕೃತ ನಿವಾಸ ಕಾವೇರಿಗೆ ತೆರಳಿ ಎಸ್ ಐಟಿ ತನಿಖೆ ಆರಂಭಿಸಿದಾಗಿನಿಂದ ಕೈಗೊಂಡಿರುವ ಕ್ರಮಗಳು ಮತ್ತು ತನಿಖೆಯ ವೇಳೆ ಹೊಳೆದಿರುವ ಹೊಳಹುಗಳ ಕುರಿತ ಸಂಪೂರ್ಣ ಮಾಹಿತಿಯನ್ನು ಮುಖ್ಯಮಂತ್ರಿಗಳಿಗೆ ಸವಿಸ್ತಾರವಾಗಿ ವಿವರಿಸಿದರೆಂದು ತಿಳಿದುಬಂದಿದೆ. ಎಸ್ ಐಟಿ ರಾಜ್ಯದ ಹಲವೆಡೆ ನಡೆಸಿದ ದಾಳಿಯ ವೇಳೆ ವಶ ಪಡಿಸಿಕೊಂಡಿರುವ ದಾಖಲೆಗಳು, ತಲೆಮರೆಸಿಕೊಂಡಿರುವ ಆರೋಪಿಗಳ ಬಂಧನಕ್ಕೆ ಮತ್ತು ವಿವಾದಿತ ಯುವತಿಯ ಪತ್ತೆಗೆ ಕೈಗೊಂಡಿರುವ ಕ್ರಮಗಳ ಕುರಿತೂ ಸಹ ಗೃಹ ಸಚಿವರು ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದ್ದಾರೆಂದು ತಿಳಿದು ಬಂದಿದೆ.